# ಕರ್ನಾಟಕ ಸರ್ಕಾರ

**ಸಂಖ್ಯೆ**: ಮಮಇ 123 ಮಮಅ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 27-06-2022.

**ಇಂದ**:
ಸರ್ಕಾರದ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

**ಇವರಿಗೆ**:
ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು

***ಮಾನ್ಯರೇ,***

**ವಿಷಯ:** ಪ್ರತಿ ವರ್ಷ ಜುಲೈ-30 ನೇ ತಾರೀಖಿನಂದು " ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ"ಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಸುತ್ತೋಲೆಯ ಸಂಖ್ಯೆ: ಮಮಇ 123 ಮಮಅ 2022, ದಿನಾಂಕ: 23.06.2022

******

ಪ್ರತಿ ವರ್ಷ ಜುಲೈ-30 ನೇ ತಾರೀಖಿನಂದು " ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ"ಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ಉಲ್ಲೇಖಿತ ದಿನಾಂಕ: 23.06.2022ರ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

N.S. Khatavkar
27/06/2022

**(ನಿರ್ಮಲ ಎಸ್. ಖಟಾವ್‌ಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ



Generated from eOffice by KRISHANA KUMAR S, DM-D-I(AC-A), SUPERINTENDENT, CHILD WELFARE SECTION on 27/06/2022 03:21 PM / 2022 02:52 PM

# ಕರ್ನಾಟಕಸರ್ಕಾರ

ಸಂಖ್ಯೆ: ಮಮಇ 123 ಮಮಅ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 23.06.2022

## ಸುತ್ತೋಲೆ

| | |
|---|---|
| **ವಿಷಯ:** | ಪ್ರತಿ ವರ್ಷ ಜುಲೈ-30 ನೇ ತಾರೀಖಿನಂದು "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ" ಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು. |

** ** **

ಭಾರತೀಯ ಸಂವಿಧಾನದಲ್ಲಿ ಶೋಷಣೆಯ ವಿರುದ್ಧದ ಹಕ್ಕನ್ನು ಅನುಚ್ಛೇದ-23 ಮತ್ತು 24 ರಲ್ಲಿ ವಿವರಿಸಲಾಗಿದೆ. ಈ ಪ್ರಕಾರವಾಗಿ ಮಾನವ ಕಳ್ಳ ಸಾಗಾಣಿಕೆ ಕಾನೂನಿನ್ವಯ ಶಿಕ್ಷಾರ್ಹ ಅಪರಾಧವಾಗಿದೆ. ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದು ಇದು ಆತಂಕಕಾರಿಯಾದ ಬೆಳವಣಿಗೆಯಾಗಿರುತ್ತದೆ.

ಈ ಪಿಡುಗನ್ನು ಸ್ಥಳೀಯ ಮಟ್ಟದಲ್ಲಿ ತಡೆಯುವುದು ಅನಿವಾರ್ಯವಾಗಿರುತ್ತದೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ಮತ್ತು ಸಾಗಾಣಿಕೆಗೆ ಒಳಪಟ್ಟ ಮಹಿಳೆಯರ ಮತ್ತು ಮಕ್ಕಳ ಪುನರ್ವಸತಿ ಮಾಡುವುದು ನಾಗರೀಕ ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ. ಈ ಹಿನ್ನಲೆಯಲ್ಲಿ, **ವಿಶ್ವಸಂಸ್ಥೆಯು ಜುಲೈ-30 ಮಾನವ ಕಳ್ಳ ಸಾಗಾಣಿಕೆ ತಡೆ ದಿನವೆಂದು ಘೋಷಿಸಿರುತ್ತದೆ.**

ಮಾನವ ಕಳ್ಳ ಸಾಗಾಣಿಕೆ ನಿವಾರಣೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಪೋಲಿಸ್, ಕಾರ್ಮಿಕ, ಕಂದಾಯ, ಸಮಾಜ ಕಲ್ಯಾಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಆರೋಗ್ಯ, ಶಿಕ್ಷಣ ಮತ್ತು ಕಾನೂನು ಇಲಾಖೆಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಈ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸುವುದು ಅಗತ್ಯವಾಗಿರುತ್ತದೆ. ಈ ಹಿನ್ನಲೆಯಲ್ಲಿ ಜುಲೈ-30 ರಂದು ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ ಈ ಕೆಳಕಂಡ ಕೆಲವು ಅರ್ಥಪೂರ್ಣ ಚಟುವಟಿಕೆಗಳನ್ನು ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತ ಮಟ್ಟದಲ್ಲಿ ಆಯೋಜಿಸುವಂತೆ ಸೂಚಿಸಿದೆ.

ಎಲ್ಲಾ ಹಂತದ ಸರ್ಕಾರಿ ಕಛೇರಿಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆಗಟ್ಟಲು ಪ್ರತಿಜ್ಞಾ ಕಾರ್ಯಕ್ರಮ ನಡೆಸುವುದು.

**ಪ್ರತಿಜ್ಞೆ:**

**"ಕರ್ನಾಟಕವನ್ನು ಮಾನವ ಕಳ್ಳ ಸಾಗಾಣಿಕೆಯಿಂದ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಜನರನ್ನುರಕ್ಷಿಸಲು ಹಾಗೂ ಸಾಗಾಣಿಕೆಗೆ ಒಳಪಟ್ಟವರಿಗೆ ಸೂಕ್ತ ನ್ಯಾಯ ಒದಗಿಸಲು ನನ್ನ ಸೇವೆಯನ್ನುಮುಡುಪಾಗಿಡುತ್ತೇನೆ.**



Generated from eOffice by KRISHANA, WCD-SEC, ASSISTANT, WOMEN AND CHILD DEVELOPMENT SEC on 27/07/2022 02:52 PM

ಸಂವಿಧಾನದಲ್ಲಿ ನೀಡಿರುವ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ" ಎಂದು ಈ ಮೂಲಕ ಪ್ರತಿಜ್ಞೆ ಮಾಡುತ್ತೇನೆ ".

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:**

- ಜಿಲ್ಲಾ ಮಟ್ಟದಲ್ಲಿ ಎಲ್ಲಾ ಅಧಿಕಾರಿಗಳನ್ನು ಆಹ್ವಾನಿಸಿ ಪ್ರತಿಜ್ಞೆ ಕೈಗೊಳ್ಳುವುದು.
- ಕಾರ್ಯಾಗಾರ/ಸೆಮಿನಾರ್ ಗಳನ್ನು ಆಯೋಜಿಸುವುದು.
- ಪ್ರಮುಖ ದಿನ ಪತ್ರಿಕೆಗಳಲ್ಲಿ ಮಾನವ ಕಳ್ಳ ಸಾಗಾಣಿಕೆ ಹಾಗೂ ಇದಕ್ಕಾಗಿ ವಿಧಿಸುವ ಶಿಕ್ಷೆ ಕುರಿತು ಜಾಹೀರಾತು ನೀಡುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
- ತಾಲ್ಲೂಕು ಹಾಗೂ ಗ್ರಾಮ ಮಟ್ಟಗಳಲ್ಲಿ ಸ್ಥಳಿಯ ಸಂಸ್ಥೆಗಳ ಹಾಗೂ ಚುನಾಯಿತ ಪ್ರತಿನಿಧಿಗಳ ಸಹಯೋಗದೊಂದಿಗೆ ಬೀದಿ ನಾಟಕ ಹಾಗೂ ಮಾನವ ಸರಪಳಿಯನ್ನು ರಚಿಸುವುದು.
- ಕರಪತ್ರಗಳನ್ನು ಮುದ್ರಿಸಿ ಹಂಚುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

**ಕಾರ್ಮಿಕ ಇಲಾಖೆ:**

- ಎಲ್ಲಾ ಪ್ರಮುಖ ಕಾರ್ಮಿಕ ಸಂಘಟನೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳನ್ನು ಆಹ್ವಾನಿಸಿ, ಬಾಲ ಕಾರ್ಮಿಕ ಪದ್ಧತಿ, ಜೀತ ಪದ್ಧತಿ ಹಾಗೂ ಮಾನವ ಕಳ್ಳ ಸಾಗಾಣಿಕೆ ನಿಷೇದ ಕುರಿತು ಪ್ರತಿಜ್ಞೆ ತೆಗೆದುಕೊಳ್ಳುವುದು.
- ಕಾರ್ಮಿಕರು ಹಾಗೂ ಕಾರ್ಖಾನೆಗಳ ಮಾಲಿಕರಿಗೆ ಮಾನವ ಕಳ್ಳ ಸಾಗಾಣಿಕೆ ನಿಷೇದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು.
- ಜಾಹೀರಾತು ಫಲಕ ಹಾಗೂ ಹೋರ್ಡಿಂಗ್ಸ್ ಪ್ರಮುಖ ಸ್ಥಳಗಳಲ್ಲಿ ಅಳವಡಿಸುವುದು.

**ಪೋಲಿಸ್ ಇಲಾಖೆ:**

- ಹೊಯ್ಸಳ ವಾಹನಗಳ ಮೂಲಕ ಜುಲೈ-30 ರಂದು "ಮಾನವ ಕಳ್ಳ ಸಾಗಾಣಿಕೆಯನ್ನು ನಿಲ್ಲಿಸಿ" ಎಂದು ಘೋಷಣೆ ಮಾಡುವುದು.
- ಸಾರ್ವಜನಿಕರಿಗೆ ಮಾನವ ಕಳ್ಳ ಸಾಗಾಣಿಕೆ ಅಧಿನಿಯಮ/ಕಾಯ್ದೆಯಡಿ ಇರುವ ಶಿಕ್ಷೆಗಳ ಬಗ್ಗೆ ಅರಿವು ಮೂಡಿಸುವುದು.

**ಕಂದಾಯ ಇಲಾಖೆ:**

- ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತಿಜ್ಞೆ ತೆಗೆದುಕೊಳ್ಳುವುದು.
- ಮಾನವ ಕಳ್ಳ ಸಾಗಾಣಿಕೆ, ಬಾಲ ಕಾರ್ಮಿಕ ಪದ್ಧತಿ ತಡೆಯುವ ವಿಧಾನಗಳ ಕುರಿತು ಕಾರ್ಯಾಗಾರ/ಸೆಮಿನಾರ್ ಹಾಗೂ ಚರ್ಚೆಗಳನ್ನು ಏರ್ಪಡಿಸುವುದು.
- ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅವರ ಕಛೇರಿಗಳಲ್ಲಿಯೇ ಸಾರ್ವಜನಿಕರು, ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಪ್ರತಿಜ್ಞೆ ತೆಗೆದುಕೊಳ್ಳುವಂತೆ ಸೂಚಿಸುವುದು.
- ಮಾನವ ಕಳ್ಳ ಸಾಗಾಣಿಕೆಗೆ ಒಳಗಾದ ವ್ಯಕ್ತಿಗಳ ಪುನರ್ವಸತಿಯನ್ನು ಸಮಗ್ರವಾಗಿ ನೆರವೇರಿಸಲು ಜಿಲ್ಲಾಮಟ್ಟದಲ್ಲಿ ಶಿಬಿರಗಳನ್ನು ಆಯೋಜಿಸುವುದು ಹಾಗೂ ಅವರ ಮಕ್ಕಳಿಗೆ ಶಿಕ್ಷಣ ಸೌಲಭ್ಯ, ವಿದ್ಯಾರ್ಥಿ ವೇತನವನ್ನು ನೀಡುವುದು.
- ಮಾನವ ಕಳ್ಳ ಸಾಗಾಣಿಕೆ ತಡೆಗಾಗಿ ಶ್ರಮಿಸುತ್ತಿರುವ ಸಂಸ್ಥೆ, ಅಧಿಕಾರಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು.



Generated from eOffice by KRISHANA, KUMARS SP DWC (A), SUPERINTENDENT, WOMEN AND CHILD WELFARE SEC on 27/07/2022 02:52 PM

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ:**

- ಮಾನವ ಕಳ್ಳ ಸಾಗಾಣಿಕೆ, ಜೀತ ಪದ್ಧತಿ, ಬಾಲ ಕಾರ್ಮಿಕ ಪದ್ಧತಿ ಹಾಗೂ ಬಾಲ್ಯ ವಿವಾಹ ನಿಷೇಧ ಕುರಿತು ಬೀದಿ ನಾಟಕ, ಸಾಕ್ಷಚಿತ್ರ, ಕಿರುಚಿತ್ರಗಳನ್ನು ತಯಾರಿಸಿ ಸಾರ್ವಜನಿಕರಿಗೆ ಅರಿವು ಮೂಡಿಸುವುದು.
- ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಹಂತಗಳಲ್ಲಿ ಕಳ್ಳ ಸಾಗಾಣಿಕೆ/ಜೀತ ಪದ್ಧತಿಯಿಂದ ಮುಕ್ತರಾದವರಿಗೆ ಪುನರ್ವಸತಿ ಕಲ್ಪಿಸುವುದು.
- ಗ್ರಾಮ ಪಂಚಾಯಿತಿಗಳ ಸಾರ್ವಜನಿಕ ಸ್ಥಳದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತಂತೆ ಗೋಡೆ ಬರಹ ಬರೆಸುವುದು, ಮಾನವ ಕಳ್ಳ ಸಾಗಾಣಿಕೆ ಮುಕ್ತ ಗ್ರಾಮಗಳನ್ನು ಫಲಕ/ಗೋಡೆ ಬರಹದ ಮೂಲಕ ಘೋಷಿಸುವುದು.
- ಗ್ರಾಮ ಪಂಚಾಯತ್ ಮಟ್ಟದ ಕಾವಲು ಸಮಿತಿ ಸದಸ್ಯರಿಗೆ ಮಾನವ ಕಳ್ಳ ಸಾಗಾಣಿಕೆ ಕುರಿತು ಅರಿವು ಮೂಡಿಸುವುದು.
- ಗ್ರಾಮದಿಂದ ವಲಸೆ ಹೋದ ಮತ್ತು ಗ್ರಾಮಕ್ಕೆ ಹೊಸದಾಗಿ ವಲಸೆ ಬಂದಿರುವ ಸಾರ್ವಜನಿಕರ ಮಾಹಿತಿಯನ್ನು ಪರಿಶೀಲಿಸುವುದು.

**ಕಾನೂನು ಇಲಾಖೆ:**

- ರಾಜ್ಯ ಮಟ್ಟದ ವೆಬಿನಾರ್ ಹಾಗೂ ಸೆಮಿನಾರ್ ಗಳನ್ನು ಆಯೋಜಿಸಿ ವಿಷಯ ತಜ್ಞರಿಂದ ಅಧಿಕಾರಿಗಳಿಗೆ ತರಬೇತಿ ನೀಡುವುದು.
- ಪಬ್ಲಿಕ ಪ್ರಾಸಿಕ್ಯೂಟರ್ಸ್, ಸಹಾಯಕ ಪಬ್ಲಿಕ ಪ್ರಾಸಿಕ್ಯೂಟರ್ಸ್ ಹಾಗೂ ಎಲ್ಲಾ ಕಾನೂನು ಅಧಿಕಾರಿಗಳು ಪ್ರತಿಜ್ಞೆ ಕೈಗೊಳ್ಳುವುದು. ಮಾನವ ಕಳ್ಳ ಸಾಗಾಣಿಕೆಗೆ ಸಂಬಂಧಿಸಿದ ಪ್ರಕರಣಗಳ ಬಗ್ಗೆ ನ್ಯಾಯಾಲಯದಲ್ಲಿ ವಾದ ಮಂಡಿಸಿ, ಅಪರಾಧಿಗಳಿಗೆ ಶಿಕ್ಷೆ ಕೊಡಿಸುವುದು.
- ಮಾನವ ಕಳ್ಳ ಸಾಗಾಣಿಕೆಗೆ ಸಂಬಂಧಿಸಿದ ಪ್ರಕರಣಗಳ ಬಗ್ಗೆ ಜಿಲ್ಲೆ ಹಾಗೂ ತಾಲ್ಲೂಕು ಕಾನೂನು ಸೇವಾ ಪ್ರಾಧಿಕಾರಗಳಲ್ಲಿ ಪರಿಶೀಲಿಸಿ ಹೊಸ ನಿರ್ಣಯಗಳನ್ನು ಕೈಗೊಳ್ಳುವುದು.

**ಸಮಾಜ ಕಲ್ಯಾಣ ಇಲಾಖೆ:**

- ಮಾನವ ಕಳ್ಳ ಸಾಗಾಣಿಕೆ ಕುರಿತ ಪೋಸ್ಟರ್ಸ್ ಗಳನ್ನು ತಯಾರಿಸಿ, ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಡೆಯುತ್ತಿರುವ ಎಲ್ಲಾ ವಸತಿ ನಿಲಯಗಳ ಆವರಣಗಳಲ್ಲಿ ಪ್ರದರ್ಶಿಸುವುದು.
- ಇಲಾಖೆಯ ಅಧೀನದಲ್ಲಿರುವ ಎಲ್ಲಾ ಕಛೇರಿಗಳಲ್ಲಿ ಪ್ರತಿಜ್ಞೆ ಕೈಗೊಳ್ಳುವುದು ಹಾಗೂ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು.
- ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಮಾನವ ಕಳ್ಳ ಸಾಗಾಣಿಕೆ ಬಗ್ಗೆ ಅರಿವು ಮೂಡಿಸಿ, ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಸಹಕರಿಸುವುದು.
- ಮಕ್ಕಳ ಸಹಾಯವಾಣಿ/ಪೋಲಿಸ್ ಸಹಾಯವಾಣಿ/ ಮಹಿಳಾ ಸಹಾಯವಾಣಿ ಸಂಖ್ಯೆಗಳನ್ನು ವಸತಿ ನಿಲಯಗಳ ಗೋಡೆಗಳ ಮೇಲೆ ಬರೆಸುವುದು.



Generated from eOffice by KRISHANA, WCD-SSP(WCD-WCA), SUPERINTENDENT, WOMEN AND CHILD WELFARE SEC on 27/09/2022 02:52 PM

**ಆರೋಗ್ಯ ಇಲಾಖೆ:**

- ಆಸ್ಪತ್ರೆಗಳ ಆವರಣಗಳಲ್ಲಿ ಬಾಲ ಕಾರ್ಮಿಕ ಪದ್ಧತಿ, ಮಾನವ ಕಳ್ಳ ಸಾಗಾಣಿಕೆ, ಜೀತ ಪದ್ಧತಿ ತಡೆ ಕುರಿತು ಹೊರ್ಡಿಂಗ್ಸ್ ಗಳನ್ನು ಪ್ರದರ್ಶಿಸುವುದು.
- ವೈದ್ಯರು, ದಾದಿಯರು, ರೋಗಿಗಳು ಹಾಗೂ ಆಸ್ಪತ್ರೆಯ ಇತರೆ ಸಿಬ್ಬಂದಿಗಳು ಸೇರಿ ಪ್ರತಿಜ್ಞೆ ಕೈಗೊಳ್ಳುವುದು ಹಾಗೂ ಭಾಷಣಗಳನ್ನು ಏರ್ಪಡಿಸುವುದು.
- ಅಂಗನವಾಡಿ ಕಾರ್ಯಕರ್ತೆಯರು, ಸ್ವಯಂ ಸೇವಾ ಸಂಸ್ಥೆಗಳು, ಆಶಾ ಕಾರ್ಯಕರ್ತೆಯರು ಸಾರ್ವಜನಿಕ ಸ್ಥಳಗಳಲ್ಲಿ ಮಾನವ ಸರಪಳಿ ನಿರ್ಮಿಸುವುದು, ಜಾಥ, ಬೀದಿ ನಾಟಕ, ಬಿತ್ತಿ ಪತ್ರ ಹಂಚಿಕೆ ಇತ್ಯಾದಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುವುದು.

**ಶಿಕ್ಷಣ ಇಲಾಖೆ:**

- ಜುಲೈ-30 ನೇ ತಾರೀಕಿನಂದು ಎಲ್ಲಾ ಶಾಲೆ ಹಾಗೂ ಕಾಲೇಜುಗಳ ವಿದ್ಯಾರ್ಥಿಗಳು ಪ್ರಾರ್ಥನೆಯ ನಂತರ ಪ್ರತಿಜ್ಞೆ ಕೈಗೊಳ್ಳುವುದು.
- ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಎಲ್ಲಾ ವಿಧದ ಸಾಗಾಣಿಕೆ, ಜೀತ ಪದ್ಧತಿ ಹಾಗೂ ಬಾಲ ಕಾರ್ಮಿಕ ಪದ್ಧತಿಯ ಕುರಿತು ಪಠ್ಯವನ್ನು ಸೇರ್ಪಡೆಗೊಳಿಸುವುದು.
- ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮವನ್ನು ನಡೆಸುವುದು.

(ವಂದಿತಾ ಶರ್ಮಾ)
**ಸರ್ಕಾರದ ಮುಖ್ಯ ಕಾರ್ಯದರ್ಶಿ.**

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
7. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.
9. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
10. ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿ.



Generated from eOffice by KRISHANA, WCD-ASST(KC), ASSISTANT, CHILD WELFARE SEC on 27/09/2022 02:52 PM